**ಕರ್ನಾಟಕ ವಿಧಾನಸಭೆ**
**ಹದಿನಾರನೇ ವಿಧಾನಸಭೆ**
**ಎರಡನೇ ಅಧಿವೇಶನ**

# ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ (ತಿದ್ದುಪಡಿ) ವಿಧೇಯಕ, 2023

**(2023ರ ವಿಧಾನಸಭೆಯ ವಿಧೇಯಕ ಸಂಖ್ಯೆ–18)**

ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಅಧಿನಿಯಮ, 2012ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಅಧಿನಿಯಮ, 2012ನ್ನು (2015ರ ಕರ್ನಾಟಕ ಅಧಿನಿಯಮ ಸಂಖ್ಯೆ 26) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ (ತಿದ್ದುಪಡಿ) ಅಧಿನಿಯಮ, 2023 ಎಂದು ಕರೆಯತಕ್ಕದ್ದು.

(2) ಇದು 2023ರ ನವಂಬರ್ 8ನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. 3ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಅಧಿನಿಯಮ, 2012 (2015ರ ಕರ್ನಾಟಕ ಅಧಿನಿಯಮ 26) (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ), 3ನೇ ಪ್ರಕರಣದಲ್ಲಿ,-

(ಎ) (1)ನೇ ಉಪಪ್ರಕರಣದಲ್ಲಿ "ಒಂದು ವರ್ಷದ ಕಡ್ಡಾಯ ಗ್ರಾಮೀಣ ಸೇವೆಗೆ" ಎಂಬ ಪದಗಳ ಮೊದಲು "ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಲಾದಂತೆ ಅಸ್ತಿತ್ವದಲ್ಲಿರುವ ಖಾಲಿಹುದ್ದೆಗಳಲ್ಲಿ" ಎಂಬ ಪದಗಳನ್ನು ಸೇರಿಸತಕ್ಕದ್ದು.

(ಬಿ) (1)ನೇ ಉಪಪ್ರಕರಣದ ತರುವಾಯ ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

"ಪರಂತು, ಅಭ್ಯರ್ಥಿಗಳು ಕೇಂದ್ರ ಅಥವಾ ರಾಜ್ಯ ಸರ್ಕಾರದ ನಿಯತ ಸೇವೆಗಾಗಿ ಆಯ್ಕೆಯಾದರೆ, ಅಂಥ ಅಭ್ಯರ್ಥಿಗಳನ್ನು ವಿನಾಯಿತಿಸತಕ್ಕದ್ದು."

(ಸಿ) (3)ನೇ ಉಪಪ್ರಕರಣದಲ್ಲಿ "ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳಲ್ಲಿ ಸಾಮಾನ್ಯ ಕರ್ತವ್ಯ ನಿರತ ವೈದ್ಯರ ಒಟ್ಟು ಕನಿಷ್ಠ ಸಂಬಳಕ್ಕಿಂತ ನೂರು ರೂಪಾಯಿಗಳಷ್ಟು ಕಡಿಮೆಗೆ ಸಮನಾಗಿರುವ" ಎಂಬ ಪದಗಳಿಗೆ ಬದಲಾಗಿ "ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಿದಂತೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

(ಡಿ) (4)ನೇ ಉಪಪ್ರಕರಣದಲ್ಲಿ "ಕಡ್ಡಾಯ ಗ್ರಾಮೀಣ ಸೇವೆಗೆ ಒಳಪಡದಿರುವಂಥ" ಎಂಬ ಪದಗಳ ತರುವಾಯ "ಅಥವಾ ಕೆಲಸ ಮಾಡಲು ನಿರಾಕರಿಸುವ ಅಥವಾ ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹುದಾದಂಥ ಷರತ್ತುಗಳನ್ನು ಪಾಲಿಸದಿರುವ" ಎಂಬ ಪದಗಳನ್ನು ಸೇರಿಸತಕ್ಕದ್ದು.

**3. 4ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 4ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ,-

(ಎ) "ಒಂದು ವರ್ಷದ ಕಡ್ಡಾಯ ಸೇವೆಗೆ" ಎಂಬ ಪದಗಳಿಗೆ ಮೊದಲು "ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಲಾದಂತೆ ಅಸ್ತಿತ್ವದಲ್ಲಿರುವ ಖಾಲಿಹುದ್ದೆಗಳಲ್ಲಿ" ಎಂಬ ಪದಗಳನ್ನು ಸೇರಿಸತಕ್ಕದ್ದು.

(ಬಿ) "ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿಶೇಷತಜ್ಞರ ಒಟ್ಟು ಕನಿಷ್ಠ ಸಂಬಳಕ್ಕಿಂತ ನೂರು ರೂಪಾಯಿಗಳಷ್ಟು ಕಡಿಮೆಗೆ ಸಮನಾಗಿರುವ ನಿಯಮಿಸಬಹುದಾದ" ಎಂಬ ಪದಗಳಿಗೆ ಬದಲಾಗಿ "ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಿದಂತೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

(ಸಿ) (1)ನೇ ಉಪಪ್ರಕರಣದ ತರುವಾಯ ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

"ಪರಂತು, ಸ್ನಾತಕೋತ್ತರ ಪದವಿಯ ತರುವಾಯ, ಅಭ್ಯರ್ಥಿಗಳು ಕೇಂದ್ರ ಅಥವಾ ರಾಜ್ಯ ಸರ್ಕಾರದ ನಿಯತ ಸೇವೆಗಾಗಿ ಆಯ್ಕೆಯಾದರೆ, ಅಂಥ ಅಭ್ಯರ್ಥಿಗಳನ್ನು ವಿನಾಯಿತಿಸತಕ್ಕದ್ದು."

**4. 5ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 5ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ,-

(ಎ) "ಒಂದು ವರ್ಷದ ಕಡ್ಡಾಯ ಸೇವೆಗೆ" ಎಂಬ ಪದಗಳಿಗೆ ಮೊದಲು "ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಲಾದಂತೆ ಅಸ್ತಿತ್ವದಲ್ಲಿರುವ ಖಾಲಿಹುದ್ದೆಗಳಲ್ಲಿ" ಎಂಬ ಪದಗಳನ್ನು ಸೇರಿಸತಕ್ಕದ್ದು.

(ಬಿ) "ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಹಿರಿಯ ವಿಶೇಷತಜ್ಞರ ಒಟ್ಟು ಕನಿಷ್ಠ ಸಂಬಳಕ್ಕಿಂತ ನೂರು ರೂಪಾಯಿಗಳಷ್ಟು ಕಡಿಮೆಗೆ ಸಮನಾಗಿರುವ ನಿಯಮಿಸಬಹುದಾದ" ಎಂಬ ಪದಗಳಿಗೆ ಬದಲಾಗಿ "ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಿದಂತೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

(ಸಿ) ಮೊದಲನೇ ಪರಂತುಕದ ತರುವಾಯ ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

"ಮತ್ತು ಪರಂತು, ಅಭ್ಯರ್ಥಿಗಳು ಕೇಂದ್ರ ಅಥವಾ ರಾಜ್ಯ ಸರ್ಕಾರದ ನಿಯತ ಸೇವೆಗಾಗಿ ಆಯ್ಕೆಯಾದರೆ, ಅಂಥ ಅಭ್ಯರ್ಥಿಗಳನ್ನು ವಿನಾಯಿತಿಸತಕ್ಕದ್ದು."

**5. ನಿರಸನ ಮತ್ತು ಉಳಿಸುವಿಕೆಗಳು.-** (1) ಕರ್ನಾಟಕ ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ (ತಿದ್ದುಪಡಿ) ಅಧ್ಯಾದೇಶ, 2023 (2023ರ ಕರ್ನಾಟಕ ಅಧ್ಯಾದೇಶ ಸಂ. 05)ನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

(2) ಅಂಥ ನಿರಸನವು ಏನೇ ಒಳಗೊಂಡಿದ್ದರೂ ಸದರಿ ಅಧ್ಯಾದೇಶದ ಅಡಿಯಲ್ಲಿ ಏನೇ ಮಾಡಿದ್ದರೂ ಅಥವಾ ಯಾವುದೇ ಕ್ರಮವನ್ನು ಕೈಗೊಂಡಿದ್ದರೂ ಈ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ ಅಧಿನಿಯಮ, 2012 (2015ರ ಕರ್ನಾಟಕ ಅಧಿನಿಯಮ 26)ರ ಪ್ರಕರಣ 3, 4 ಮತ್ತು 5-ಅನ್ನು,-

(1) ಇಲಾಖೆಯಲ್ಲಿ ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಿದಂತೆ ಅಸ್ತಿತ್ವದಲ್ಲಿರುವ ಖಾಲಿ ಹುದ್ದೆಗಳಿಗೆ ವೈದ್ಯರನ್ನು ಕೌನ್ಸಿಲಿಂಗ್ ಮೂಲಕ ಕಡ್ಡಾಯವಾಗಿ ಸ್ಥಳ ನಿಯುಕ್ತಿಗೊಳಿಸುವುದನ್ನು ನಿರ್ಬಂಧಿಸಲು ಮತ್ತು ಸ್ಟೈಪಂಡನ್ನು ಸರ್ಕಾರವು ನಿರ್ಧರಿಸಲು; ಮತ್ತು

(2) ಕೇಂದ್ರ ಅಥವಾ ರಾಜ್ಯ ಸರ್ಕಾರಿ ಸೇವೆಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಕಡ್ಡಾಯ ಗ್ರಾಮೀಣ ಸೇವೆಯಿಂದ ವಿನಾಯಿತಿಸಲು,

-ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ವಿಷಯವು ತುರ್ತು ಸ್ವರೂಪದ್ದಾಗಿರುವುದರಿಂದ ಮತ್ತು ರಾಜ್ಯ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿಲ್ಲದಿರುವುದರಿಂದ, ಮೇಲಿನ ಉದ್ದೇಶವನ್ನು ಸಾಧಿಸಲು ಅಭ್ಯರ್ಥಿಗಳು ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ (ತಿದ್ದುಪಡಿ) ಅಧ್ಯಾದೇಶ, 2023 (2023ರ ಕರ್ನಾಟಕ ಅಧ್ಯಾದೇಶ 05)ನ್ನು ಪ್ರಖ್ಯಾಪಿಸಲಾಗಿತ್ತು.

ಈ ವಿಧೇಯಕವು ಸದರಿ ಅಧ್ಯಾದೇಶದ ಬದಲಿ ವಿಧೇಯಕವಾಗಿದೆ.

ಆದ್ದರಿಂದ ಈ ವಿಧೇಯಕ

.

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಹೆಚ್ಚಿನ ಆರ್ಥಿಕ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ಕರ್ನಾಟಕ ವಿಧಾನ ಸಭೆಯ ಕಾರ್ಯ ವಿಧಾನ ಮತ್ತು ನಡವಳಿಕೆ ನಿಯಮಗಳ 80ನೇ ನಿಯಮದ (1)ನೇ ಉಪನಿಯಮದ ಮೂಲಕ ಅಗತ್ಯಪಡಿಸಲಾದಂತೆ ವಿವರಣಾತ್ಮಕ ಹೇಳಿಕೆ.**

ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ ಅಧಿನಿಯಮ, 2012 (2015ರ ಕರ್ನಾಟಕ ಅಧಿನಿಯಮ 26)ರ ಪ್ರಕರಣ 3, 4 ಮತ್ತು 5-ಅನ್ನು,-

(1) ಇಲಾಖೆಯಲ್ಲಿ ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಿದಂತೆ ಅಸ್ತಿತ್ವದಲ್ಲಿರುವ ಖಾಲಿ ಹುದ್ದೆಗಳಿಗೆ ವೈದ್ಯರನ್ನು ಕೌನ್ಸಿಲಿಂಗ್ ಮೂಲಕ ಕಡ್ಡಾಯವಾಗಿ ಸ್ಥಳ ನಿಯುಕ್ತಿಗೊಳಿಸುವುದನ್ನು ನಿರ್ಬಂಧಿಸಲು ಮತ್ತು ಸ್ಟೈಪಂಡನ್ನು ಸರ್ಕಾರವು ನಿರ್ಧರಿಸಲು; ಮತ್ತು

(2) ಕೇಂದ್ರ ಅಥವಾ ರಾಜ್ಯ ಸರ್ಕಾರಿ ಸೇವೆಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಕಡ್ಡಾಯ ಗ್ರಾಮೀಣ ಸೇವೆಯಿಂದ ವಿನಾಯಿತಿಸಲು,

-ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ವಿಷಯವು ತುರ್ತು ಸ್ವರೂಪದ್ದಾಗಿರುವುದರಿಂದ ಮತ್ತು ರಾಜ್ಯ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿಲ್ಲದಿರುವುದರಿಂದ, ಮೇಲಿನ ಉದ್ದೇಶವನ್ನು ಸಾಧಿಸಲು ಅಭ್ಯರ್ಥಿಗಳು ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ (ತಿದ್ದುಪಡಿ) ಅಧ್ಯಾದೇಶ, 2023 (2023ರ ಕರ್ನಾಟಕ ಅಧ್ಯಾದೇಶ 05)ನ್ನು ಪ್ರಖ್ಯಾಪಿಸಲಾಗಿತ್ತು.

ಈ ವಿಧೇಯಕವು ಸದರಿ ಅಧ್ಯಾದೇಶದ ಬದಲಿ ವಿಧೇಯಕವಾಗಿದೆ.

**ದಿನೇಶ್ ಗುಂಡೂ ರಾವ್**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿ

**ಎಂ.ಕೆ. ವಿಶಾಲಾಕ್ಷಿ**
ಕಾರ್ಯದರ್ಶಿ
ಕರ್ನಾಟಕ ವಿಧಾನಸಭೆ

## ಅನುಬಂಧ

## ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಅಧಿನಿಯಮ, 2012ನ್ನು (2015ರ ಕರ್ನಾಟಕ ಅಧಿನಿಯಮ ಸಂಖ್ಯೆ 26)ರ ಉದ್ಧೃತಭಾಗ

**X X XX XX**

**3. ವೈದ್ಯಕೀಯ ಕೋರ್ಸನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವೆ.-** (1) ಎಂಬಿಬಿಎಸ್ ಪದವಿ ಕೋರ್ಸನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಮತ್ತು ಒಂದು ವರ್ಷದ ಇಂರ್ನ್ಶಿಪ್ ಪೂರ್ಣಗೊಳಿಸಿದ ತರುವಾಯ ಪ್ರತಿಯೊಬ್ಬ ಅಭ್ಯರ್ಥಿಯು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ಕೌನ್ಸಿಲಿಂಗ್‌ನ ಪ್ರಕ್ರಿಯೆಯ ಮೂಲಕ ಮೆರಿಟ್ ಆಧಾರದ ಮೇಲೆ ಹಂಚಿಕೆಯಾದ ಗ್ರಾಮೀಣ ಪ್ರದೇಶಗಳಲ್ಲಿನ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಅಥವಾ ಸರ್ಕಾರಿ ಆಸ್ಪತ್ರೆಗಳಲ್ಲಿ ಒಂದು ವರ್ಷದ ಕಡ್ಡಾಯ ಗ್ರಾಮೀಣ ಸೇವೆಗೆ ಒಳಪಡತಕ್ಕದ್ದು. ಅಂಥ ಸೇವಾ ಅವಧಿಯಲ್ಲಿ ಆತನನ್ನು ಕಿರಿಯ ನಿವಾಸಿ (ಜೂನಿಯರ್ ರೆಸಿಡೆಂಟ್) ಎಂದು ಕರೆಯತಕ್ಕದ್ದು.

(2) [**xxx**]

(3) ಒಂದು ವರ್ಷದ ಕಡ್ಡಾಯ ಗ್ರಾಮೀಣ ಸೇವೆಗೆ 2[ಫಿಫಿಫಿ]2 ಒಳಪಟ್ಟ ಪ್ರತಿಯೊಬ್ಬ ಅಭ್ಯರ್ಥಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳಲ್ಲಿ ಸಾಮಾನ್ಯ ಕರ್ತವ್ಯ ನಿರತ ವೈದ್ಯರ ಒಟ್ಟು ಕನಿಷ್ಠ ಸಂಬಳಕ್ಕಿAತ ನೂರು ರೂಪಾಯಿಗಳಷ್ಟು ಕಡಿಮೆಗೆ ಸಮನಾಗಿರುವ ಅಂಥ ವೃತ್ತಿ ವೇತನವನ್ನು (ಸ್ಟೈಪೆಂಡ್) ಸಂದಾಯ ಮಾಡತಕ್ಕದ್ದು.

(4) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, (1)ನೇ ಉಪ ಪ್ರಕರಣದಲ್ಲಿ ಕಡ್ಡಾಯ ಗ್ರಾಮೀಣ ಸೇವೆಗೆ ಒಳಪಡದಿರುವಂಥ ಪ್ರತಿಯೊಬ್ಬ ಅಭ್ಯರ್ಥಿಯು, ಕರ್ನಾಟಕ ವೈದ್ಯಕೀಯ ನೋಂದಣಿ ಅಧಿನಿಯಮ, 1961ರಡಿಯಲ್ಲಿ ಅಥವಾ ಭಾರತೀಯ ವೈದ್ಯಕೀಯ ಪರಿಷತ್ತು ಅಧಿನಿಯಮ, 1956 ರಡಿಯಲ್ಲಿ ರಾಜ್ಯದಲ್ಲಿ ಶಾಶ್ವತ ನೋಂದಣಿಗೆ ಅರ್ಹರಾಗಿರತಕ್ಕದ್ದಲ್ಲ:

ಪರಂತು, ಅಂಥ ಅಭ್ಯರ್ಥಿಗಳಿಗೆ, ಸೇವೆ ಯ ಅವಧಿಯಲ್ಲಿ ರೋಗಿಗಳಿಗೆ ಸ್ವತಂತ್ರವಾಗಿ ಚಿಕಿತ್ಸೆ ನೀಡಲು ಮತ್ತು ಔಷಧಿಗಳನ್ನು ನಿಯಮಿಸಲು ಸದರಿ ಸೇವೆಗೆ ಒಳಪಡುವವರೆಗೆ, ತಾತ್ಕಾಲಿಕ ನೋಂದಣಿಯನ್ನು ನೀಡಬಹುದಾಗಿದೆ.

**X X XX XX**

**4. ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವೆ .-** (1) 3ನೇ ಪ್ರಕರಣದ (1)ನೇ ಉಪಪ್ರಕರಣದ ಅಡಿಯಲ್ಲಿ ಕಡ್ಡಾಯ ಗ್ರಾಮೀಣ ಸೇವೆಗೆ ಒಳಪಡಿಸಿದ ಅಭ್ಯರ್ಥಿಗಳನ್ನು ಹೊರತುಪಡಿಸಿ, ಸ್ನಾತಕೋತ್ತರ ಡಿಪ್ಲೋಮೊ ಅಥವಾ ಪದವಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದಂಥ ಪ್ರತಿಯೊಬ್ಬ ಅಭ್ಯರ್ಥಿಯು, ನಿಯಮಿಸಬಹುದಾದ ಅಂಥ ವಿಧಾನದಲ್ಲಿ ರಾಜ್ಯದಲ್ಲಿ ಕೌನ್ಸಿಲಿಂಗ್ ಪ್ರಕ್ರಿಯೆಯ ಮೂಲಕ ಮೆರಿಟ್ ಆಧಾರದ ಮೇಲೆ ಆಯ್ಕೆಯಾದ ಮತ್ತು ಸ್ಥಳ ನಿಯುಕ್ತಿಯಾದ ನಗರ ಪ್ರದೇಶದಲ್ಲಿ ಇರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಒಂದು ವರ್ಷದ ಕಡ್ಡಾಯ ಸೇವೆಗೆ ಒಳಪಡತಕ್ಕದ್ದು. ಅಂಥ ಸೇವಾ ಅವಧಿಯಲ್ಲಿ ಆತನನ್ನು ಹಿರಿಯ ನಿವಾಸಿ (ಸೀನಿಯರ್ ರೆಸಿಡೆಂಟ್) ಎಂದು ಕರೆಯತಕ್ಕದ್ದು. ಆತನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿಶೇಷತಜ್ಞರ ಒಟ್ಟು ಕನಿಷ್ಠ ಸಂಬಳಕ್ಕಿಂತ ನೂರು ರೂಪಾಯಿಗಳಷ್ಟು ಕಡಿಮೆಗೆ ಸಮನಾಗಿರುವ ನಿಯಮಿಸಬಹುದಾದ ಅಂಥ ವೃತ್ತಿ ವೇತನಕ್ಕೆ ಅರ್ಹನಾಗಿರತಕ್ಕದ್ದು.

**X X XX XX**

**5. ಸೂಪರ್‌ಸ್ಪೆಷಾಲಿಟಿ ಪದವಿ ಕೋರ್ಸು ಪೂರ್ಣಗೊಳಿಸಿದ ಅಭ್ಯರ್ಥಿಯ ಕಡ್ಡಾಯ ಸೇವೆ.-** (1) ಸೂಪರ್ ಸ್ಪೆಷಾಲಿಟಿ ಕೋರ್ಸುಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಪ್ರತಿಯೊಬ್ಬ ಅಭ್ಯರ್ಥಿಯು,

ನಿಯಮಿಸಬಹುದಾದ ಅಂಥ ವಿಧಾನದಲ್ಲಿ ರಾಜ್ಯದಲ್ಲಿ ಕೌನ್ಸಿಲಿಂಗ್ ಪ್ರಕ್ರಿಯೆಯ ಮೂಲಕ ಮೆರಿಟ್ ಆಧಾರದ ಮೇಲೆ ಆಯ್ಕೆಯಾದ ಮತ್ತು ಸ್ಥಳ ನಿಯುಕ್ತಿಯಾದ ಹಂಚಿಕೆಯಾದ ಜಿಲ್ಲಾ ಸರ್ಕಾರಿ ಆಸ್ಪತ್ರೆಯಲ್ಲಿ ಒಂದು ವರ್ಷದ ಕಡ್ಡಾಯ ಸೇವೆಗೆ ಒಳಪಡತಕ್ಕದ್ದು. ಆತನಿಗೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಹಿರಿಯ ವಿಶೇಷತಜ್ಞರ ಒಟ್ಟು ಕನಿಷ್ಟ ಸಂಬಳಕ್ಕಿAತ ನೂರು ರೂಪಾಯಿಗಳು ಕಡಿಮೆಗೆ ಸಮನಾಗಿರುವ ನಿಯಮಿಸಬಹುದಾದ ಅಂಥ ವೃತ್ತಿವೇತನವನ್ನು ಸಂದಾಯ ಮಾಡತಕ್ಕದ್ದು:

ಪರಂತು, 3ನೇ ಪ್ರಕರಣದ (1)ನೇ ಉಪಪ್ರಕರಣ ಅಥವಾ 4ನೇ ಪ್ರಕರಣದ (1)ನೇ ಉಪಪ್ರಕರಣದಡಿಯಲ್ಲಿ ಕಡ್ಡಾಯ ಸೇವೆಯನ್ನು ಮಾಡಿದ ಅಭ್ಯರ್ಥಿಗಳನ್ನು ಈ ಪ್ರಕರಣದಡಿಯಲ್ಲಿನ ಕಡ್ಡಾಯ ಸೇವೆಯಿಂದ ವಿನಾಯತಿಗೊಳಿಸತಕ್ಕದ್ದು.

**X X XX XX**

ಸರ್ಕಾರಿ ಮುದ್ರಣಾಲಯ, ಸುವರ್ಣ ವಿಧಾನಸೌಧ, ಬೆಳಗಾವಿ, ಪಿ7, ಕಾಸೂ , ಪ್ರತಿಗಳು 500, 04ನೇ ಡಿಸೆಂಬರ್ 2023

**KARNATAKA LEGISLATIVE ASSEMBLY**
**SIXTEENTH LEGISLATIVE ASSEMBLY**
**SECOND SESSION**

# THE KARNATAKA COMPULSORY SERVICE BY CANDIDATES COMPLETED MEDICAL COURSES (AMENDMENT) BILL, 2023

**(LA Bill No. 18 of 2023)**

A Bill further to amend the Karnataka Compulsory Service by Candidates Completed Medical Courses Act, 2012.

Whereas it is expedient to amend the Karnataka Compulsory Service by Candidates Completed Medical Courses Act, 2012(Karnataka Act 26 of 2015) for the purposes hereinafter appearing;

Be it enacted by the Karnataka State Legislature in the seventy fourth year of the Republic of India, as follows:-

**1. Short title and commencement.-**(1) This Act may be called the Karnataka Compulsory Service by Candidates Completed Medical Courses (Amendment) Act, 2023.

(2) It shall be deemed to have come into force with effect from 8th day of November 2023.

**2. Amendment of section 3.-** In the Karnataka Compulsory Service by Candidates Completed Medical CoursesAct, 2012 (Karnataka Act 26 of 2015) (hereinafter referred to as the principal Act), in section 3,-

(a) in sub-section (1), after the words "compulsory rural service", the words "in the existing vacancies as specified by the State Government" shall be inserted.

(b) after sub-section (1), the following proviso shall be inserted, namely:-

"Provided that, if candidates are selected for regular Central or State Government service, such candidates shall be exempted."

(c) in sub-section (3),for the words "equal to hundred rupees less than the minimum gross salary of General duty medical doctors in Health and Family Welfare Services", the words "as specified by the State Government" shall be substituted.

(d) in sub-section (4), after the words "undergo the compulsory rural service", the following words shall be inserted, namely:-

"or refuse to work or non compliance of the conditions as may be specified by the State Government".

**3. Amendment of section 4.-** In sub-section (1) of section 4 of the principal Act,-

(a) after the words "one year compulsory service", the words "in the existing vacancies as specified by the State Government" shall be inserted.

(b) forthe words "as may be prescribed equal to hundred rupees less than minimum gross salary of specialist of Health and Family Welfare Department" the words "as specified by the State Government" shall be substituted.

(c) after sub-section (1), the following proviso shall be inserted, namely:-

"Provided that, if candidates are selected for regular Central or State Government service, after post-graduation, such candidates shall be exempted."

**4. Amendment of section 5.-** In sub-section (1) of section 5 of the principal Act,-

(a) after the words "one year compulsory service", the words "in the existing vacancies as specified by the State Government" shall be inserted.

(b)for the words "as may be prescribed equal to hundred rupees less than minimum of gross salary of senior specialist of Health and Family Welfare Department"the words "as specified by the State Government" shall be substituted.

(c) after the first proviso the following proviso shall be inserted, namely:-

"Provided further that, if candidates are selected for regular Central or State Government service, such candidates shall be exempted."

**5**. **Repeal and savings.-** (1) The Karnataka Compulsory Service by Candidates Completed Medical Courses (Amendment) Ordinance, 2023 (Karnataka Ordinance 05 of 2023) is hereby repealed.

(2) Notwithstanding such repeal, anything done or any action taken under the principal Act, as amended by the said Ordinance, shall be deemed to have been done or taken under the principal Act, as amended by this Act.

## STATEMENT OF OBJECTS AND REASONS

It is considered necessary to amend Section 3, 4 and 5 of the Karnataka Compulsory Service by Candidates Completed Medical Courses Act, 2012 (Karnataka Act 26 of 2015) to,-

(1) restrict counseling and mandatory posting of doctors in the existing vacancies as specified by the State Government in the department and stipend shall be decided by the Government; and

(2) exempt from compulsory rural service of the candidates who are selected to Central or State Government service.

As the matter was urgent and both Houses of the State Legislature were not in a session, the Karnataka Compulsory Service by Candidates Completed Medical Courses (Amendment)Ordinance, 2023 (Karnataka Ordinance 05 of 2023)was promulgated to achieve the above object.

This Bill seeks to replace the said Ordinance.

Hence, the Bill.

## FINANCIAL MEMORANDUM

There is no extra expenditure involved in the proposed legislative measure.

**EXPLANATORY STATEMENT AS REQUIRED BY SUB-RULE (1) OF RULE 80 OF THE RULES OF PROCEDURE AND CONDUCT OF BUSINESS IN THE KARNATAKA LEGISLATIVE ASSEMBLY.**

It is considered necessary to amend Section 3, 4 and 5 of the Karnataka Compulsory Service by Candidates Completed Medical Courses Act, 2012 (Karnataka Act 26 of 2015) to,-

(1) restrict counseling and mandatory posting of doctors in the existing vacancies as specified by the State Government in the department and stipend shall be decided by the Government; and
(2) exempt from compulsory rural service of the candidates who are selected to Central or State Government service.

As the matter was urgent and both Houses of the State Legislature were not in a session, the Karnataka Compulsory Service by Candidates Completed Medical Courses (Amendment) Ordinance, 2023 (Karnataka Ordinance 05 of 2023)was promulgated to achieve the above object.

This Bill seeks to replace the said Ordinance.

**DINESH GUNDU RAO**
Minister for Health and Family Welfare

**M.K. VISHALAKSHI**
Secretary
Karnataka Legislative Assembly

## ANNEXURE

**Extract from the Karnataka Compulsory Service By Candidates Completed Medical Courses Act, 2012**

**(KARNATAKA ACT 26 OF 2015)**

**XX XX XX**

**3. Compulsory service of candidates completed medical course**.- (1) Every candidate after successful completion of MBBS degree and after completion of one year internship course shallundergo one year compulsory rural service in Government Primary Health Centres orGovernment Hospitals in rural areas allotted on the basis of merit through process of counseling insuch manner as may be prescribed. During such service he shall be called as Junior Resident

(2) Omitted

(3) Every candidate who undergoes compulsory rural service of one year shall bepaid such a stipend equal to hundred rupees less than the minimum gross salary of General dutymedical doctors in Health and Family Welfare Services.

(4) Notwithstanding anything contained in any law for the time being force every candidatewho does not undergo the compulsory rural service under sub-section (1) shall also not beeligible to permanent registration under the State under Karnataka Medical Registration Act, 1961 orunder the India Medical Council Act, 1956:

Provided that such candidates may be given a temporary registration during till he undergo the said service independently treat patients and prescribe medicine during the service period.

**XX XX XX**

**4. Compulsory service of candidates completed post graduate Medical courses.-**(1) Every candidate other than the candidate who has undergone compulsory rural service under sub-section (1) of section 3 and who has successfully completed post graduate diploma or degree shall undergo one year compulsory service in Government hospital in urban area selected and posted on the basis of merit through process of counseling in the State in such manner as may be prescribed. During such service he shall be called as senior resident. He shall be eligible for such a stipend as may be prescribed equal to hundred rupees less thanminimum gross salary of specialist of Health and Family Welfare Department:

**XX XX XX**

**5. Compulsory service of candidates completed super specialty graduatecourses.-** (1) Every candidate who has successfully completed super specialty courses shallundergo one year compulsory service in the allotted District

Government Hospital selectedand posted on the basis of merit through process of counseling in the State in such manner as maybe prescribed. He shall be paid such a stipend as may be prescribed equal to hundred rupees lessthen minimum of gross salary of senior specialist of Health and Family Welfare Department:

Provided that candidates who have done compulsory service under sub-section (1) ofsection 3 or sub-section (1) of section 4 are exempted from this compulsory service under this section.

**XX XX XX**

Govt. Press, Suvarna Vidhana Soudha, Belgavi, 04th Dec, 2023, P7, W.D. , Copies 500